ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 19-6-2017

# ಪತ್ರಿಕಾ ಪ್ರಕಟಣೆ

## ವಿಧಾನ ಪರಿಷತ್ತಿನಲ್ಲಿ ಇಂದು

## ನಕಲಿ ವೈದ್ಯರನ್ನು ನಿಗ್ರಹ ಮಾಡುವ ಉದ್ದೇಶದಿಂದ ಕಾರ್ಯಪಡೆ ರಚನೆ

**ಬೆಂಗಳೂರು, ಜೂನ್ 19 (ಕರ್ನಾಟಕ ವಾರ್ತೆ)**

ನಕಲಿ ವೈದ್ಯರನ್ನು ನಿಗ್ರಹ ಮಾಡುವ ಉದ್ದೇಶದಿಂದ ಮಂಡಳಿಯಿಂದ ಜಿಲ್ಲಾವಾರು ಕಾರ್ಯಪಡೆ (ಟಾಸ್ಕ್‌ಪೋರ್ಸ್) ರಚಿಸಲಾಗಿರುತ್ತದೆ. ನಕಲಿ ವೈದ್ಯರ ಮೇಲೆ ಮಂಡಳಿಗೆ ದೂರುಗಳು ಬಂದಲ್ಲಿ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್‌ಕುಮಾರ್ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನಲ್ಲಿ ಎಸ್. ವಿ. ಸಂಕನೂರ ಅವರ ಪ್ರಶ್ನೆಗೆ ಉತ್ತರಿಸುತ್ತಾ ರಾಜ್ಯದಲ್ಲಿ ಇದುವರೆಗೂ 2869 ನಕಲಿ ವೈದ್ಯರನ್ನು ಪತ್ತೆ ಮಾಡಲಾಗಿದೆ. ನಕಲಿ ವೈದ್ಯರ ಪ್ರಥಮ ಅಪರಾಧಕ್ಕೆ 25,000 ರೂ, ಎರಡನೆ ಅಪರಾಧಕ್ಕೆ 2.5 ಲಕ್ಷ ರೂ ಮತ್ತು ಒಂದು ವರ್ಷ ಕಾರಾಗೃಹ ಶಿಕ್ಷೆ ಮತ್ತು ಅದರ ನಂತರದ ಅಪರಾಧಗಳಿಗೆ 5 ಲಕ್ಷ ಮತ್ತು 3 ವರ್ಷದ ಕಾರಾಗೃಹ ಶಿಕ್ಷೆ ವಿಧಿಸಲಾಗುವುದು ಎಂದು ಸಚಿವರು ಸದನಕ್ಕೆ ತಿಳಿಸಿದರು.

ಎಸ್‌ಎಂ:ಕೆನ್‌ವಿ:ಜೆಡಿ:ಜಿಪಿಆರ್

## ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ವಿಧೇಯಕ – 2017

**ಬೆಂಗಳೂರು, ಜೂನ್ 19 (ಕರ್ನಾಟಕ ವಾರ್ತೆ)**

ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017 ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ವಿಧೇಯಕವನ್ನು, ಇಂದು ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವ ಸಿದ್ದರಾಮಯ್ಯ ವಿಧಾನ ಪರಿಷತ್‍ನಲ್ಲಿ ಈ ವಿಧೇಯಕವನ್ನು ಮಂಡನೆ ಮಾಡಿದರು. ಇದಕ್ಕೆ ಎಲ್ಲಾ ಸದಸ್ಯರು ಸರ್ವಾನುಮತದಿಂದ ಅಂಗೀಕರಿಸಿದರು.

ಎಸ್‌ಎಂ:ಕೆನ್‌ವಿ:ಜೆಡಿ:ಜಿಪಿಆರ್

**<u>ವಿಧಾನಸಭೆಯಲ್ಲಿ ಇಂದು:</u>**

## ದಿನಾಂಕ: 19-06-2017 ರ ವಿಧಾನಸಭೆಯ ಬೆಳಗಿನ ಕಲಾಪ

**ಬೆಂಗಳೂರು, ಜೂನ್ 19 (ಕರ್ನಾಟಕ ವಾರ್ತೆ)**

ಬೆಂಗಳೂರು ವಿಧಾನಸಭಾ ಸದಸ್ಯ ಎನ್. ಎಚ್. ಕೋನರೆಡ್ಡಿ ಅವರ ನಿಯಮ 73 ಅಡಿ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಪರವಾಗಿ ಉತ್ತರಿಸಿದ ಗ್ರಾಮೀಣಾಭಿವೃದ್ಧಿ ಸಚಿವ ಹೆಚ್. ಕೆ. ಪಾಟೀಲ್ ಅವರು ಲಿಖಿತ ಹೇಳಿಕೆ ನೀಡಿದ್ದು, ರಾಜ್ಯ ಸರ್ಕಾರವು 2017-18 ನೇ ಸಾಲಿನಲ್ಲಿ ಮೋಡ ಭಿತ್ತನೆಗಾಗಿ ರೂ. 30 ಕೋಟಿಯನ್ನು ನಿಗದಿಪಡಿಸಿರುತ್ತದೆ. ಮೋಡ ಭಿತ್ತನೆ ಕಾರ್ಯಕ್ರಮವನ್ನು ಸುಸೂತ್ರವಾಗಿ ನಡೆಸಲು ತಜ್ಞರ ಸಮಿತಿ ಸಭೆ ಕರೆಯಲಾಗಿತ್ತು. ಸಮಿತಿ ಸಭೆಯ ನಡಾವಳಿಯಂತೆ ತುರ್ತಾಗಿ ಮೋಡ ಭಿತ್ತನೆ ಕಾರ್ಯವನ್ನು ಜಾರಿ ಮಾಡಬೇಕಾದ ಕಾರಣ ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಸದರಿ ಯೋಜನೆಗೆ ದಿನಾಂಕ :27-03-2017 ರಂದು ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿ ದೊರಕಿದ್ದು, ಕಾಮಗಾರಿಯ ಟೆಂಡರ್ ಕರೆಯಲಾಗಿದ್ದು, ಪ್ರಕ್ರಿಯೆ ಮುಗಿದ ನಂತರ ಮೋಡ ಭಿತ್ತನೆ ಕಾರ್ಯಕ್ರಮವನ್ನು ಅವಶ್ಯವಿರುವ ಪ್ರದೇಶಗಳಲ್ಲಿ ಅನುಷ್ಠಾನಗೊಳಿಸಲಾಗುವುದು ಎಂದರು.

ಕರ್ನಾಟಕ ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) (ತಿದ್ದುಪಡಿ) ವಿಧೇಯಕ, 2017 (2017 ರ ವಿಧಾನ ಸಭೆಯ ಸಂಖ್ಯೆ 29) ಅನ್ನು ವಿಧಾನ ಸಭೆಯಲ್ಲಿ ಇಂದು ಮಂಡಿಸಲಾಯಿತು.

ರೋರಿಕ್ ಮತ್ತು ದೇವಿಕಾರಾಣಿ ರೋರಿಕ್ ಎಸ್ಟೇಟ್ ತಿದ್ದುಪಡಿ ವಿಧೇಯಕ, 2017 ಅನ್ನು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ವಿಧಾನ ಸಭೆಯಲ್ಲಿ ಇಂದು ಮಂಡಿಸಿದರು.

ಎಸ್‌ಎಂ:ಕೆನ್‌ವಿ:ಜೆಡಿ:ಜಿಪಿಆರ್

## ಪತ್ರಿಕಾ ಪ್ರಕಟಣೆ

<u>ರಾಜ್ಯ ಮಟ್ಟದ</u>

## ವಿವಿಧ ಕೃಷಿ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಜೂನ್ 19 (ಕರ್ನಾಟಕ ವಾರ್ತೆ)

ಕೃಷಿ ಇಲಾಖೆ ವತಿಯಿಂದ ಕೃಷಿ ವಲಯದಲ್ಲಿ ಹೊಸ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ರೈತ ಸಮುದಾಯದ ಶ್ರೇಯೋಭಿವೃದ್ಧಿಗೆ ಅಪಾರ ಕೊಡುಗೆ ನೀಡುತ್ತಿರುವ ಪರಿಣಿತರಿಗೆ "ಕೃಷಿ ಪಂಡಿತ" ಪ್ರಶಸ್ತಿಯನ್ನು, ರೈತರಲ್ಲಿ ಆರೋಗ್ಯಕರ ಸ್ಪರ್ಧಾ ಮನೋಭಾವವನ್ನುಂಟು ಮಾಡಿ ಅತಿ ಹೆಚ್ಚು ಬೆಳೆ ಇಳುವರಿ ಪಡೆದು, ಕೃಷಿ ಉತ್ಪಾದಕತೆಯ ಹೆಚ್ಚಳಕ್ಕೆ ಉತ್ತೇಜನ ನೀಡುವ ರೈತರಿಗೆ "ಕೃಷಿ ಪ್ರಶಸ್ತಿ" ಯನ್ನು ಮತ್ತು ಪ್ರಗತಿಪರ ರೈತರನ್ನು ವಿಸ್ತರಣಾ ಸೇವೆಯಲ್ಲಿ ಬಳಸಿಕೊಳ್ಳುತ್ತಾ, ರೈತರಿಂದ ರೈತರಿಗೆ ಕೃಷಿ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಿರುವ  ಮಹನೀಯರುಗಳಿಗೆ "ಶ್ರೇಷ್ಠ ಕೃಷಿಕ ಪ್ರಶಸ್ತಿ" ಪ್ರದಾನ ಮಾಡಿ ಗೌರವಿಸಲಾಗುತ್ತಿದೆ.

ಕೃಷಿ ಪಂಡಿತ ಪ್ರಶಸ್ತಿ, ಕೃಷಿ ಪ್ರಶಸ್ತಿ ಮತ್ತು ಶ್ರೇಷ್ಠ ಕೃಷಿಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಇದೇ ಜೂನ್ 21 ರಂದು ಮಧ್ಯಾಹ್ನ 12-00 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ 2013-14, 2014-15 ಹಾಗೂ 2015-16 ನೇ ಸಾಲಿನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಂಡಿದೆ. ಒಟ್ಟಾರೆ 49 ಕೃಷಿ ಪಂಡಿತರನ್ನು, 51 ರಾಜ್ಯ ಮಟ್ಟದ ಕೃಷಿ ಪ್ರಶಸ್ತಿ ವಿಜೇತರನ್ನು ಹಾಗೂ 11 ಶ್ರೇಷ್ಠ ಕೃಷಿ ಪ್ರಶಸ್ತಿ ವಿಜೇತರನ್ನು ಸನ್ಮಾನಿಸಲಾಗುವುದು.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ವಿಜೇತರಿಗೆ  ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ಈ ಸಂದರ್ಭದಲ್ಲಿ ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಲಿದ್ದಾರೆ.

ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ

ಈ ಸಮಾರಂಭದಲ್ಲಿ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಕೆ.ಜೆ. ಜಾರ್ಜ್, ಅರಣ್ಯ ಸಚಿವ ಬಿ. ರಮಾನಾಥ ರೈ, ಪಶುಸಂಗೋಪನೆ ಮತ್ತು ರೇಷ್ಮೆ ಸಚಿವ ಎ. ಮಂಜು, ತೋಟಗಾರಿಕೆ ಮತ್ತು ಮಾರುಕಟ್ಟೆ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್, ಮೀನುಗಾರಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ರಾಜ್ಯ ಸಚಿವ ಪ್ರಮೋದ್ ಮಧ್ವರಾಜ್ ಹಾಗೂ ಬೆಂಗಳೂರು ಕೇಂದ್ರ ಲೋಕಸಭಾ ಸದಸ್ಯ ಪಿ. ಸಿ. ಮೋಹನ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್

## ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಬೆಂಗಳೂರು, ಜೂನ್ 19 (ಕರ್ನಾಟಕ ವಾರ್ತೆ)

ವಿಶ್ವ ಸಂಸ್ಥೆಯ ನಿರ್ಣಯದಂತೆ ಆಯುಷ್ ಇಲಾಖೆ, ಕರ್ನಾಟಕ ಸರ್ಕಾರದ ವತಿಯಿಂದ 3ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಕಾರ್ಯಕ್ರಮವನ್ನು ಜೂನ್ 21 ರಂದು ಬೆಳಿಗ್ಗೆ 6-30 ರಿಂದ 10-30 ರವರೆಗೆ ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದೆ.

ಈ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸುವರು. ವಿವಿಧ ಸಂಘ-ಸಂಸ್ಥೆಗಳಾದ ಶ್ವಾಸ ಸಂಸ್ಥೆ, ವ್ಯಾಸ ಸಂಸ್ಥೆ, ಆರ್ಟ್ ಆಫ್ ಲಿವಿಂಗ್, ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ, ಯೋಗ ಗಂಗೋತ್ತಿ ಸರ್ಕಾರೇತರ ಸಂಸ್ಥೆಗಳು, ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ದೈಹಿಕ ಶಿಕ್ಷಕರು, ಆಯುಷ್ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು ಸೇರಿ ಒಟ್ಟು ಅಂದಾಜು 10000 ಕ್ಕೂ ಅಧಿಕ ಮಂದಿ ಭಾಗವಹಿಸುವ ನಿರೀಕ್ಷೆ ಇದೆ ಎಂದು ನಿರ್ದೇಶಕರು ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಆಯುಷ್ ನಿರ್ದೇಶನಾಲಯ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.